ಕರ್ನಾಟಕ ಸರ್ಕಾರ

**ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಕೇಂದ್ರೀಕೃತ ದಾಖಲಾತಿ ಘಟಕ, ಕಾವೇರಿ ಭವನದ ಎದುರು, ಕೆ.ಜಿ.ರಸ್ತೆ, ಬೆಂಗಳೂರು-560 009**

ಸಂಖ್ಯೆ: CAC/03/ GPTR-2022/ಮೌಲ್ಯಮಾಪನ/2022-23 ದಿನಾಂಕ:18-11-2022

## ಪ್ರಕಟಣೆ

ಪದವೀಧರ ಪ್ರಾಥಮಿಕ ಶಿಕ್ಷಕ (6 ರಿಂದ 8ನೇ ತರಗತಿ) ವೃಂದದ ಹುದ್ದೆಗಳಿಗೆ ನೇಮಕಾತಿ ಪ್ರಕ್ರಿಯೆಗೆ ಸಂಬಂಧಿಸಿದಂತೆ 1:2 ಅನುಪಾತದ ಅಭ್ಯರ್ಥಿಗಳ ತಾತ್ಕಾಲಿಕ ಪರಿಶೀಲನಾ ಪಟ್ಟಿಯನ್ನು ದಿನಾಂಕ: 27-09-2022 ರಂದು ಬೆಂಗಳೂರು ವಿಭಾಗದ, 28-09-2022 ಬೆಳಗಾವಿ ವಿಭಾಗದ ಮತ್ತು ದಿನಾಂಕ:29-09-2022 ರಂದು ಮೈಸೂರು ಹಾಗೂ ಕಲ್ಬುರ್ಗಿ ವಿಭಾಗದ ಜಿಲ್ಲೆಗಳ ಪರಿಶೀಲನಾ ಪಟ್ಟಿಯನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿತ್ತು. ಸದರಿ ಪಟ್ಟಿಯಲ್ಲಿನ ಅಭ್ಯರ್ಥಿಗಳ ಮೂಲದಾಖಲೆಗಳ ಪರಿಶೀಲನೆಯನ್ನು ಆಯಾ ಜಿಲ್ಲಾ ಉಪನಿರ್ದೇಶಕರು (ಆಡಳಿತ) ಹಾಗೂ ನೇಮಕಾತಿ ಪ್ರಾಧಿಕಾರ ರವರ ಕಛೇರಿ ಹಂತದಲ್ಲಿ ಕೈಗೊಂಡು, ಮೂಲದಾಖಲೆಗಳನ್ನು ಪರಿಶೀಲಿಸಿದಂತೆ ಅಗತ್ಯ ಮಾಹಿತಿಗಳನ್ನು ಸಿ.ಎ.ಸಿ ದತ್ತಾಂಶದಲ್ಲಿ ಇಂದೀಕರಿಸುವ ಕಾರ್ಯ ಪೂರ್ಣಗೊಳಿಸಲಾಗಿದೆ. ದತ್ತಾಂಶದಲ್ಲಿ ಇಂದೀಕರಿಸಿದಂತೆ ಮಾಹಿತಿಗಳನ್ನು ಪರಿಗಣಿಸಿ, ನಿಯಮಾನುಸಾರ 1:1 ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಸಿದ್ಧಪಡಿಸಿದೆ. 1:2 ಅನುಪಾತದ ಅರ್ಹತಾ ಪಟ್ಟಿಗೆ ಪರಿಗಣಿಸಲ್ಪಟ್ಟಿದ್ದು, ಮೂಲದಾಖಲೆಗಳ ಪರಿಶೀಲನೆಗೆ ಹಾಜರಾಗದ 170 ಅಭ್ಯರ್ಥಿಗಳನ್ನು 1:1 ತಾತ್ಕಾಲಿಕ ಆಯ್ಕೆಪಟ್ಟಿಯಿಂದ ಕೈಬಿಡಲಾಗಿದೆ. 1:1 ಅನುಪಾತದ ತಾತ್ಕಾಲಿಕ ಆಯ್ಕೆಪಟ್ಟಿಯನ್ನು ದಿನಾಂಕ:18-11-2022 ರಂದು ಇಲಾಖಾ ವೆಬ್‌ಸೈಟ್ https://schooleducation.kar.nic.in ನಲ್ಲಿ ಪ್ರಕಟಿಸಿದೆ.

ಸದರಿ 1:1 ತಾತ್ಕಾಲಿಕ ಆಯ್ಕೆಪಟ್ಟಿಗೆ ಸಂಬಂಧಿಸಿದಂತೆ ಅಭ್ಯರ್ಥಿಗಳು ಆಕ್ಷೇಪಣೆ ಸಲ್ಲಿಸಲು ದಿನಾಂಕ:19-11-2022 ರಿಂದ 23-11-2022 ರವರೆಗೆ ಕಾಲಾವಕಾಶ ನೀಡಿದೆ. ಅಭ್ಯರ್ಥಿಗಳು ತಮ್ಮ ಆಕ್ಷೇಪಣೆಯನ್ನು ಸಂಬಂಧಪಟ್ಟ ಜಿಲ್ಲೆಯ ಉಪನಿರ್ದೇಶಕರು (ಆಡಳಿತ) ಹಾಗೂ ನೇಮಕಾತಿ ಪ್ರಾಧಿಕಾರ ರವರ ಕಚೇರಿಯಲ್ಲಿ ಅಗತ್ಯ ದಾಖಲೆಗಳೊಂದಿಗೆ ಖುದ್ದಾಗಿ ಸಲ್ಲಿಸುವುದು. ದಿನಾಂಕ:23-11-2022ರ ನಂತರ ಆಕ್ಷೇಪಣೆಗಳನ್ನು ಸಲ್ಲಿಸಲು ಅವಕಾಶವಿರುವುದಿಲ್ಲ.

**ಸಹಿ/-**

ಆಯುಕ್ತರು

ಸಾರ್ವಜನಿಕ ಶಿಕ್ಷಣ ಇಲಾಖೆ